**Akashvani : Bangalore**
**Regional Bulletin In Kannada**
**01.07.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**01.07.2025 / 18.40 hrs**
**<><*<><>*><>**

## ಮುಖ್ಯಾಂಶಗಳು

೧. ಹಾಸನದಲ್ಲಿ ಹೆಚ್ಚುತ್ತಿರುವ ಹೃದಯಾಘಾತ ಪ್ರಕರಣ ; ೧೦ ದಿನದೊಳಗೆ ಅಧ್ಯಯನ ವರದಿ ಸಲ್ಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

೨. ಜಲಾಶಯಗಳಿಂದ ಕೃಷ್ಣಾ ಅಚ್ಚುಕಟ್ಟು ಪ್ರದೇಶಗಳಿಗೆ ನೀರು ಹರಿಸಲು ಸಚಿವ ಆರ್.ಬಿ. ತಿಮ್ಮಾಪೂರ್ ನಿರ್ದೇಶನ

೩. ಪೊಲೀಸರ ಅಮಾನತು ಪ್ರಕರಣ ರದ್ದುಗೊಳಿಸಿದ ಸಿಎಟಿ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ಸರ್ಕಾರ ನಿರ್ಧಾರ

೪. ನಾಳೆ ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿಗಿರಿಧಾಮದಲ್ಲಿ ಸಚಿವ ಸಂಪುಟ ಸಭೆ

೫. ಚಿಕ್ಕಮಗಳೂರು ಜಿಲ್ಲೆಯ ಎತ್ತಿನ ಭುಜ ಚಾರಣಕ್ಕೆ ಅರಣ್ಯ ಇಲಾಖೆ ತಾತ್ಕಾಲಿಕ ನಿಷೇಧ

**<><*<><>*><>**

ಕಳೆದೊಂದು ತಿಂಗಳಿನಲ್ಲಿ ಹಾಸನ ಜಿಲ್ಲೆಯಲ್ಲಿ ಇಪ್ಪತ್ತಕ್ಕೂ ಅಧಿಕ ಮಂದಿ ಹೃದಯಾಘಾತಕ್ಕೆ ಒಳಗಾಗಿ ಸಾವಿಗೀಡಾದ ವಿಚಾರವನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಈ ಸರಣಿ ಸಾವುಗಳಿಗೆ ನಿಖರ ಕಾರಣವನ್ನು ಪತ್ತೆಹಚ್ಚಿ, ಅದಕ್ಕೆ ಪರಿಹಾರ ಮಾರ್ಗೋಪಾಯಗಳನ್ನು ಕಂಡುಕೊಳ್ಳಲು ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ. ರವೀಂದ್ರನಾಥ್ ನೇತೃತ್ವದಲ್ಲಿ ತಜ್ಞರ ಸಮಿತಿ ರಚಿಸಿ, ೧೦ ದಿನಗಳ ಒಳಗಾಗಿ ಅಧ್ಯಯನ ವರದಿ ನೀಡುವಂತೆ ಸೂಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ರಾಜ್ಯದಲ್ಲಿ ಯುವ ಜನರ ಹಠಾತ್ ನಿಧನಕ್ಕೆ ಕಾರಣಗಳೇನು? ಕೋವಿಡ್ ಲಸಿಕೆಯ ದುಷ್ಪರಿಣಾಮಗಳೇನಾದರೂ ಇರಬಹುದೇ? ಎಂದು ಕೂಲಂಕಷವಾಗಿ ಅಧ್ಯಯನ ನಡೆಸಲು ಇದೇ ಸಮಿತಿಗೆ ಕಳೆದ ಫೆಬ್ರವರಿ ತಿಂಗಳಲ್ಲೇ ಆದೇಶ ನೀಡಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಹೃದ್ರೋಗಿಗಳನ್ನು ಪರಿಶೀಲನೆಗೊಳಪಡಿಸಿ, ವಿಶ್ಲೇಷಣೆ ಮಾಡುವ ಕಾರ್ಯ ಕೂಡ ಪ್ರಗತಿಯಲ್ಲಿದೆ. ಜನರ ಆರೋಗ್ಯ ರಕ್ಷಣೆಗಾಗಿ ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿದ್ದು, ಸಾರ್ವಜನಿಕರು ಎದೆನೋವು, ಉಸಿರಾಟದ ತೊಂದರೆ ಕಂಡುಬಂದರೆ ಅಲಕ್ಷ್ಯ ತೋರದೆ ತಕ್ಷಣವೇ ಸಮೀಪದ ಆರೋಗ್ಯ ಕೇಂದ್ರಗಳಿಗೆ ತೆರಳಿ ಪರೀಕ್ಷೆಗೆ ಒಳಗಾಗಬೇಕು ಎಂದು ಮುಖ್ಯಮಂತ್ರಿ ಮನವಿ ಮಾಡಿದ್ದಾರೆ.

**<><*<><>*><>**

ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯಗಳಲ್ಲಿ ೮೦.೫೮ ಟಿಎಂಸಿ ನೀರು ಸಂಗ್ರಹವಾಗಿದ್ದು, ಇದೇ ೮ರಿಂದ ಕೃಷ್ಣಾ ಅಚ್ಚುಕಟ್ಟು ಪ್ರದೇಶಗಳಿಗೆ ಹೆಚ್ಚು ನೀರು ಹರಿಸಲು ತೀರ್ಮಾನ ಕೈಗೊಳ್ಳಲಾಗಿದೆ ಎಂದು ಅಬಕಾರಿ ಸಚಿವ ಹಾಗೂ ಕೃಷ್ಣಾ ಮೇಲ್ದಂಡೆ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಆರ್ ಬಿ ತಿಮ್ಮಾಪೂರ ತಿಳಿಸಿದ್ದಾರೆ. ವಿಕಾಸಸೌಧದಲ್ಲಿ ಇಂದು ನಡೆದ ಕೃಷ್ಣಾ ಮೇಲ್ದಂಡೆ ಯೋಜನೆಯ ೨೦೨೫-೨೬ನೇ ಸಾಲಿನ ಮುಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಆಲಮಟ್ಟಿ ಮತ್ತು ನಾರಾಯಣಪುರ ಅಣೆಕಟ್ಟಿನಲ್ಲಿ ಕಳೆದ ಸಾಲಿಗಿಂತ ೫೪.೭೭ ಟಿಎಂಸಿ ಹೆಚ್ಚುವರಿ ನೀರು ಸಂಗ್ರಹವಾಗಿದೆ. ಈ ಹಿನ್ನೆಲೆಯಲ್ಲಿ ಮಳೆ ಆಧರಿಸಿ ಅವಶ್ಯಕತೆಗೆ ತಕ್ಕಂತೆ ನೀರು ಹರಿಸಲು ಸಚಿವರು ಸೂಚಿಸಿದ್ದಾರೆ. ಇದೇ ೮ ರಿಂದ ಮುಂದಿನ ೧೨೦ ದಿನಗಳಿಗೆ ಮುಂಗಾರು ಹಂಗಾಮಿಗೆ ನೀರು ಪೂರೈಸಲು ತೀರ್ಮಾನಿಸಲಾಗಿದೆ. ಒಳಹರಿವು ಆಧರಿಸಿ ಕಾಲುವೆಗಳಿಗೆ ಸತತವಾಗಿ ನೀರು ಬಿಡಲು ಸಚಿವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**<><*<><>*><>**

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣದಲ್ಲಿ ಅಮಾನತುಗೊಳಿಸಿರುವ ಬೆಂಗಳೂರು ಪೂರ್ವ ವಿಭಾಗದ ಹೆಚ್ಚುವರಿ ಆಯುಕ್ತ ವಿಕಾಸ್ ಕುಮಾರ್ ಅವರ ಅಮಾನತು ರದ್ದುಗೊಳಿಸುವಂತೆ ಕೇಂದ್ರ ಆಡಳಿತಾತ್ಮಕ ನ್ಯಾಯಮಂಡಳಿ ಸಿಎಟಿ ಇಂದು ಆದೇಶ ನೀಡಿದೆ. ಇದೇ ವೇಳೆ ಐವರು ಪೊಲೀಸರನ್ನು ಮರು ನೇಮಕ ಮಾಡುವಂತೆ ಸಿಎಟಿ ಶಿಫಾರಸ್ಸು ಮಾಡಿದೆ. ಪೊಲೀಸರಿಗೆ ಮಾಂತ್ರಿಕ ಶಕ್ತಿ ಇಲ್ಲ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದೆ. ಸಿಎಟಿ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ಅವಕಾಶವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

**<><*<><>*><>**

ನಾಳೆ ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿಗಿರಿಧಾಮದಲ್ಲಿ ಸಚಿವ ಸಂಪುಟ ಸಭೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಇಂದು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅಧಿಕಾರಿಗಳೊಂದಿಗೆ ನಂದಿಗಿರಿಧಾಮಕ್ಕೆ ಭೇಟಿ ನೀಡಿ ಸಿದ್ಧತೆಗಳನ್ನು ಪರಿಶೀಲಿಸಿದರು. ಸಂಪುಟ ಸಭೆ

ಹಿನ್ನೆಲೆಯಲ್ಲಿ ನಂದಿಬೆಟ್ಟದ ತಪ್ಪಲಿನ ಪ್ರದೇಶದಲ್ಲಿ ವಾಹನಗಳಿಗೆ ನಿರ್ಬಂಧ ವಿಧಿಸಲಾಗಿದೆ. ಇದರ ಜೊತೆಗೆ ರಸ್ತೆ ಬದಿ ವ್ಯಾಪಾರ ವಹಿವಾಟನ್ನು ನಿಷೇಧಿಸಿ ಜಿಲ್ಲಾಧಿಕಾರಿ ಎ.ಬಿ. ಬಸವರಾಜು ಆದೇಶ ಹೊರಡಿಸಿದ್ದಾರೆ.

<><*<><>*><>

ಕಾಂಗ್ರೆಸ್ ಶಾಸಕರ ಜೊತೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಮಾತುಕತೆ ನಡೆಸಿರುವುದು ಪಕ್ಷ ಸಂಘಟನೆ ಅಹವಾಲು ಸ್ವೀಕಾರಕ್ಕೆ ಸೀಮಿತ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಬದಲಾವಣೆ ಅಥವಾ ಸಚಿವ ಸಂಪುಟ ವಿಸ್ತರಣೆ ಬಗ್ಗೆ ಚರ್ಚೆಯಾಗುತ್ತಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಶಾಸಕರು ಇಲ್ಲದಿರುವ ಕ್ಷೇತ್ರಗಳ ಜವಾಬ್ದಾರಿಯನ್ನು ಒಬ್ಬೊಬ್ಬ ಶಾಸಕರಿಗೆ ನೀಡಲಾಗಿದೆ. ಕೆಲವು ಶಾಸಕರ ಹೇಳಿಕೆಗಳ ಹಿನ್ನೆಲೆಯಲ್ಲಿ ಪಕ್ಷದಲ್ಲಿ ಶಿಸ್ತು ತರಲು ಪ್ರಯತ್ನಿಸಲಾಗುತ್ತಿದ್ದು, ಮುಖ್ಯಮಂತ್ರಿ ಸ್ಥಾನದಲ್ಲಿ ಸಿದ್ದರಾಮಯ್ಯ ಅವರಿದ್ದು, ನಾವೆಲ್ಲರೂ ಅವರ ಕೈ ಬಲಪಡಿಸಬೇಕು ಎಂದು ತಿಳಿಸಿದ್ದಾರೆ.

<><*<><>*><>

ಊಹಾ ಪತ್ರಿಕೋದ್ಯಮ ಪತ್ರಿಕೋದ್ಯಮಕ್ಕೆ ಹಾಗೂ ಸಮಾಜಕ್ಕೂ ಅಪಾಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಇಲಾಖೆ, ಕಾರ್ಯನಿರತ ಪತ್ರಕರ್ತರ ಸಂಘದ ಸಂಯುಕ್ತಾಶ್ರಯದಲ್ಲಿ ನಡೆದ "ಪತ್ರಿಕಾ ದಿನಾಚರಣೆ-೨೦೨೫" ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾಧ್ಯಮಗಳು ಸ್ವತಂತ್ರವಾಗಿ ಹಾಗೂ ನಿರ್ಭಿತಿಯಿಂದ ಸುದ್ದಿ ಮಾಡಬೇಕು ಎಂದು ತಿಳಿಸಿದ್ದಾರೆ. ಸಂವಿಧಾನದ ಮೌಲ್ಯಗಳು ಮತ್ತು ಸತ್ಯವನ್ನು ಮರೆಮಾಚುವ ಕೆಲಸವಾಗಬಾರದು ಎಂದು ಹೇಳಿದ್ದಾರೆ.

<><*<><>*><>

ದೇಶದ ದುಡಿಯುವ ವರ್ಗದಲ್ಲಿ ಶೇಕಡ ೯೦ ರಷ್ಟು ಕಾರ್ಮಿಕರು ಅಸಂಘಟಿತ ವಲಯದಲಿದ್ದು, ಸಾಮಾಜಿಕ ಭದ್ರತೆ ಒದಗಿಸುವ ನಿಟ್ಟಿನಲ್ಲಿ ಹಲವಾರು ಯೋಜನೆಗಳನ್ನು ಜಾರಿಗೆ ತರಲಾಗಿದೆ ಎಂದು ಕಾರ್ಮಿಕ  ಸಚಿವ ಸಂತೋಷ್ ಎಸ್. ಲಾಡ್ ತಿಳಿಸಿದ್ದಾರೆ. ಧಾರವಾಡ ಜಿಲ್ಲೆಯಲ್ಲಿ ವಿವಿಧ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸರ್ಕಾರದ ಯೋಜನೆಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಪಂಚ ಗ್ಯಾರಂಟಿ ಯೋಜನೆಗಳಿಂದ ಜನರ ಜೀವನ ಉತ್ತಮವಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಕೇಂದ್ರೀಯ ತೆರಿಗೆ ಇಲಾಖೆ ವತಿಯಿಂದ ಜಿ.ಎಸ್.ಟಿ-ತೆರಿಗೆ ಸರಳೀಕರಣ ಮತ್ತು ನಾಗರಿಕರ ಸಬಲೀಕರಣ ಎನ್ನುವ ಧ್ಯೇಯ ವಾಕ್ಯದೊಂದಿಗೆ ಜಿಎಸ್‌ಟಿ   ದಿನಾಚರಣೆ ೨೦೨೫ನ್ನು ಇಂದು ತೆರಿಗೆ ಇಲಾಖೆ ಪ್ರಾದೇಶಿಕ ಕಚೇರಿ ಆವರಣದಲ್ಲಿ ಆಚರಿಸಲಾಯಿತು. ಜಿಎಸ್‌ಟಿ  ಪ್ರಾರಂಭವಾಗಿ ೮ ವರ್ಷವಾಗಿರುವ  ಹಿನ್ನೆಲೆಯಲ್ಲಿ ಹಮ್ಮಿಕೊಳ್ಳಲಾದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಸರ್ಕಾರಿ ಡಿಜಿಟಲ್ ಟ್ರಾನ್ಸ್ ಫಾರ್ಮೆಷನ್-ವಾದ್ವಾಣಿ ಫೌಂಡೇಶನ್ ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಪ್ರಕಾಶ್, ತೆರಿಗೆ ಅಧಿಕಾರಿಗಳು, ಕಾನೂನು, ಸೇರಿದಂತೆ ಹಲವು ಕ್ಷೇತ್ರಗಳ ಸಹಯೋಗ ಜಿಎಸ್‌ಟಿಯ ಯಶಸ್ಸಿನ ಹಿಂದಿದೆ ಎಂದು ತಿಳಿಸಿದ್ದಾರೆ. ಸಿಬಿಐಸಿ ಸದಸ್ಯ ಹಾಗೂ ವಿಶೇಷ ಕಾರ್ಯದರ್ಶಿ ಡಿ.ಪಿ.ನಾಗೇಂದ್ರಪ್ಪ, ಅಬಕಾರಿ ಮುಖ್ಯ ಆಯುಕ್ತ ಆಶೀಸ್ ಚಂದ್ರನ್, ಸೆಂಟ್ರಲ್ ಜಿಎಸ್‌ಟಿ ಮುಖ್ಯ ಆಯುಕ್ತೆ ಕಾಜಲ್ ಸಿಂಗ್ ಇನ್ನಿತರರು ಉಪಸ್ಥಿತರಿದ್ದರು. ನಂತರ ಜಿ.ಎಸ್.ಟಿ-ತೆರಿಗೆ ಸರಳೀಕರಣ ಮತ್ತು ನಾಗರಿಕರ ಸಬಲೀಕರಣ ಕುರಿತು ಸಂವಾದ ನಡೆಯಿತು.

<><*<><>*><>

ಚಿಕ್ಕಮಗಳೂರು  ಜಿಲ್ಲೆಯ ಮೂಡಿಗೆರೆ ತಾಲೂಕಿನ ಎತ್ತಿನ ಭುಜ ವ್ಯಾಪ್ತಿಯಲ್ಲಿ ಚಾರಣಕ್ಕೆ ಅರಣ್ಯ ಇಲಾಖೆ ತಾತ್ಕಾಲಿಕವಾಗಿ ನಿಷೇಧ ವಿಧಿಸಿದೆ. ಈ ಕುರಿತಂತೆ ಚಿಕ್ಕಮಗಳೂರು ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ  ಪ್ರಕಟಣೆ ನೀಡಿದೆ. ಮೂಡಿಗೆರೆ ವಲಯದ ಎತ್ತಿನ ಭುಜ ಸುತ್ತಮುತ್ತ ಮಳೆ ಹಾಗೂ ಮಂಜು ಕವಿದ ವಾತವರಣವಿದೆ. ಜೊತೆಗೆ ಕೆಲವೆಡೆ ಭೂ-ಕುಸಿತಗಳು ಉಂಟಾಗುವ ಸಾಧ್ಯತೆ ಇರುವುದರಿಂದ ಜುಲೈ ೩೧ರವರೆಗೆ ಚಾರಣ ಮಾಡುವುದನ್ನು, ಪ್ರವಾಸಿಗರು ಕಾಡಿಗೆ ಭೇಟಿ ನೀಡುವುದನ್ನು ನಿಷೇಧಿಸಿ ಆದೇಶ ಹೊರಡಿಸಲಾಗಿದೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಮಂಡ್ಯ ವಿಶ್ವವಿದ್ಯಾಲಯದಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ತಾಂತ್ರಿಕ ಹಾಗೂ ನಿರ್ವಹಣಾ ಶಾಸ್ತ್ರಗಳಿಗೆ ಸಂಬಂಧಿಸಿದಂತೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ ಯಿಂದ ಅನುಮೋದನೆ ಪಡೆದು ಎಂ.ಸಿ.ಎ ಮತ್ತು ಎಂ.ಬಿ.ಎ ಸ್ನಾತಕೋತ್ತರ ಪದವಿ ಆರಂಭಿಸಲಾಗುತ್ತಿದೆ ಎಂದು ವಿಶ್ವ ವಿದ್ಯಾಲಯದ ಉಪ ಕುಲಪತಿ ಶಿವಚಿತ್ತಪ್ಪ ತಿಳಿಸಿದ್ದಾರೆ.

೨. ಹಾವೇರಿ ಜಿಲ್ಲೆಯ ಎಲ್ಲ ಎಲ್ಲಾ ಕಂದಾಯ ಕಚೇರಿಗಳಲ್ಲಿ ಹಳೆಯ ಹಾಗೂ ಶಿಥಿಲಗೊಂಡ ದಾಖಲೆಗಳನ್ನು ಶಾಶ್ವತವಾಗಿ ಡಿಜಿಟಲ್ ರೂಪದಲ್ಲಿ ಉಳಿಸಿಕೊಳ್ಳಲು, “ಭೂ ಸುರಕ್ಷಾ” ಯೋಜನೆ ಅನುಷ್ಠಾನಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ.

೩. ಮಂಡ್ಯ ಜಿಲ್ಲೆಯಲ್ಲಿನ ದೇವಸ್ಥಾನ, ಚರ್ಚ್ ಮತ್ತು ಮಸೀದಿಗಳಲ್ಲಿ ಬಾಲ್ಯ ವಿವಾಹ ನಡೆಯುವುದು ಕಂಡುಬಂದಲ್ಲಿ ಮುಖ್ಯಸ್ಥರ ವಿರುದ್ಧ ಕ್ರಮಕೈಗೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ್ ತಿಳಿಸಿದ್ದಾರೆ.

೪. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ನಾಯಕರಂಡನಹಳ್ಳಿ ಸಮೀಪ ಸಂಭವಿಸಿದ ಅಪಘಾತದಲ್ಲಿ ನಾಲ್ಕು ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**